990 (1172) ಶ್ರೀ ಅಶೋಕ ಗುರಪ್ಪ ಶಾಬಾದಿ (ಸಿಂಧಗಿ). ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ,

ಅ) ಸಿಂಧಗಿ ವಿಧಾನಸಭಾ ಕ್ಷೇತ್ರದಲ್ಲಿ ಪ್ರಾಥಮಿಕ, ಪ್ರೌಢಶಾಲೆಗಳು ಹಾಗೂ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು (ವಿವರ ನೀಡುವುದು),

ಆ) ಸಿಂಧಗಿ ತಾಲ್ಲೂಕಿನ ರಾಂಪುರ ಪಿ ಎ ಹಾಗೂ ಖೈನೂರು ಗ್ರಾಮಗಳಲ್ಲಿ ಪ್ರೌಢ ಶಾಲೆಗಳ ಅವಶ್ಯಕತೆ ಇದ್ದು, ಮಂಜೂರು ಮಾಡಲು ಕೈಗೊಂಡಿರುವ ಕ್ರಮಗಳೇನು,

ಇ) ಹುಣಸೇಹಾಳ್‌ನಲ್ಲಿ ಉರ್ದು ವಿದ್ಯಾರ್ಥಿಗಳು ಹೆಚ್ಚಾಗಿದ್ದು, ಈ ಗ್ರಾಮಕ್ಕೆ ಒಂದು ಉರ್ದು ಪ್ರೌಢ ಶಾಲೆ ಮಂಜೂರು ಮಾಡಲು ಕೈಗೊಂಡಿರುವ ಕ್ರಮಗಳೇನು?

ಶ್ರೀ ಬಸವರಾಜ ಎಸ್ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಸರ್ಕಾರಿ ಪ್ರಾಥಮಿಕ ಶಾಲೆಗಳು 302
ಅನುದಾನಿತ ಪ್ರಾಥಮಿಕ ಶಾಲೆಗಳು 11
ಅನುದಾನರಹಿತ ಪ್ರಾಥಮಿಕ ಶಾಲೆಗಳು 32
ಸರ್ಕಾರಿ ಪ್ರೌಢ ಶಾಲೆಗಳು 17
ಅನುದಾನಿತ ಪ್ರೌಢ ಶಾಲೆಗಳು 26
ಅನುದಾನರಹಿತ ಪ್ರೌಢ ಶಾಲೆಗಳು 11
ಸರ್ಕಾರಿ ಪದವಿಪೂರ್ವ ಕಾಲೇಜುಗಳು 01
ಅನುದಾನಿತ ಪದವಿಪೂರ್ವ ಕಾಲೇಜುಗಳು 10
ಅನುದಾನರಹಿತ ಪದವಿಪೂರ್ವ ಕಾಲೇಜುಗಳು 05

ಆ) ಸಿಂಧಗಿ ತಾಲ್ಲೂಕಿನ ರಾಂಪುರ ಪಿಎ ಹಾಗೂ ಖೈನೂರ ಗ್ರಾಮಗಳಲ್ಲಿ ಸರ್ವಶಿಕ್ಷಣ ಅಬಿಯಾನದಡಿ 2003–04ನೇ ಸಾಲಿಗೆ ಉನ್ನತೀಕರಿಸಿದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ, 8ನೇ ತರಗತಿಯನ್ನು ಪ್ರಾರಂಭಿಸಲಾಗಿದೆ ಈಗ ಶಾಲೆಗಳು ನಡೆಯುತ್ತಿವೆ ಸದರಿ ಶಾಲೆಗಳನ್ನು ಪ್ರೌಢಶಾಲೆಗಳನ್ನಾಗಿ ಪರಿವರ್ತಿಸಲು ಕೋರಿ ಪ್ರಸ್ತಾವನೆ ಸರ್ಕಾರದಲ್ಲಿ ಸ್ವೀಕೃತವಾಗಿರುವುದಿಲ್ಲ

ಇ) ಆಯವ್ಯಯದಲ್ಲಿ ಲಭ್ಯವಿರುವ ಅವಕಾಶ, ಶೈಕ್ಷಣಿಕ ಅಗತ್ಯತೆ ಇತ್ಯಾದಿಗಳನ್ನು ಪರಿಗಣಿಸಿ, ಹಂತ ಹಂತವಾಗಿ ಸರ್ಕಾರಿ ಪ್ರೌಢಶಾಲೆಗಳನ್ನು ಮಂಜೂರು ಮಾಡಲಾಗುತ್ತಿದೆ